# ಬಿಜೆಪಿ ಪಕ್ಷಕ್ಕೆ ಸೇರಿದ ಕಾಂಗ್ರೆಸ್ ಪಕ್ಷದ ಗುರ್‍ರಂ ಶ್ರೀನಿವಾಸ್



ಬಳ್ಳಾರಿ ಏ –: ಕಾಂಗ್ರೆಸ್ ನಿಷ್ಠಾವಂತ ಕಾರ್ಯಕರ್ತ ಹಾಗು ಮಾಜಿ ಸಚಿವ ದಿವಾಕರ್ ಬಾಬುರವರ ಆಪ್ತ ಬೆಂಬಲಿಗ ಗುರ್‍ರಂ ಶ್ರೀನವಾಸ್ ತಮ್ಮ ಆಪ್ತ ಬೆಂಬಲಿಗರೊಂದಿಗೆ ಹಾಗು ನೂರಾರು ಯುವಕರ ಜೊತೆ ಬಿಜೆಪಿ ಲೋಕಸಭೆ ಅಭ್ಯರ್ಥಿ ಮಾಜಿ ಸಚಿವ ಬಿ. ಶ್ರೀರಾಮುಲುರವರ ಗೃಹ ಕಚೇರಿಯಲ್ಲಿ ಶ್ರೀರಾಮುಲು ಅವರ ಸಮ್ಮುಖದಲ್ಲಿ ಅಧಿಕೃತವಾಗಿ ಬಿಜೆಪಿ ಪಕ್ಷ ಸೇರಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಶ್ರೀಧರ್, ಪಟ್ಟಾಭಿರಾಮ್, ಡಿ.ಕಿರಣ್ ಕುಮಾರ್, ಇಮ್ಯಾನುವೆಲ್, ಆರೋಗ್ಯ ರಾಜ್ ,ಸೀನ, ಬಿ.ಕಿರಣ್ ಕುಮಾರ್ ,ಮಹೇಶ್ ಇನ್ನು ನೂರಾರು ಯುವಕರು ಉಪಸ್ಥಿತರಿದ್ದರು.

# ಬಳ್ಳಾರಿ ಜಿಲ್ಲಾ ಬಿಜೆಪಿ ಯುವಮೋರ್ಚ ಅಧ್ಯಕ್ಷ ಎಂ.ಎಸ್.ಸಿದ್ದಪ್ಪ ನೇತೃತ್ವದಲ್ಲಿ ನೇಹಾ ಹಿರೇಮಠ ಕೊಲೆ ಖಂಡಿಸಿ ಮೇಣದಬತ್ತಿಯೊಂದಿಗೆ ಪ್ರತಿಭಟನೆ




ಬಳ್ಳಾರಿ ಏ–: ನೇಹಾ ಹಿರೇಮಠ ಕೊಲೆ ಖಂಡಿಸಿ ಮೇಣದಬತ್ತಿಯೊಂದಿಗೆ ರಾಯಲ್ ಸರ್ಕಲ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು. ನಂತರ ನೇಹಾ ಹಿರೇಮಠ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಒಂದು ನಿಮಿಳಗಳ ಕಾಲ ಮೌನಚಾರಣೆ ಮಾಡಲಾಗಿತ್ತು.

ಈ ಪ್ರತಿಭಟನೆಯಲ್ಲಿ ಬಳ್ಳಾರಿ ಜಿಲ್ಲಾ ಬಿಜೆಪಿ ಯುವಮೋರ್ಚ ಅಧ್ಯಕ್ಷರಾದ ಎಂ.ಎಸ್.ಸಿದ್ದಪ್ಪ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷರು ಕುಮಾರಿ ಸುಗುಣ, ಕೆ,ರಾಜ್ಯ ಯುವ ಮೋರ್ಚ ಕಾರ್ಯದರ್ಶಿಗಳು ಅಡವಿ ಸ್ವಾಮಿ, ಯುವಮೋರ್ಚಾ ಪ್ರಭಾರಿಗಳಾದ ಹಾಗೂ ಪ್ರಧಾನ ಕಾರ್ಯದರ್ಶಿಗಳಾದ ಸೋಮನಗೌಡ, ರಾಜ್ಯ ಮಹಿಳಾ ಮೋರ್ಚ ಕಾರ್ಯಕಾರಣಿ ಸದಸ್ಯರು ಶ್ರೀಮತಿ ವಿಜಯಲಕ್ಷ್ಮಿ, ಜವಳಿ ನಿಗಮ ಮಂಡಳಿ ಮಾಜಿ ಅಧ್ಯಕ್ಷರು ವಿರೂಪಾಕ್ಷಿ ಗೌಡ್ರು, ಜಿಲ್ಲಾ ಉಪಾಧ್ಯಕ್ಷರು ಸಾಧನ, ಹಿರೇಮಠ ಶ್ರೀಮತಿ ಡಾ. ಅರುಣ,ಬಳ್ಳಾರಿ ನಗರ ಅಧ್ಯಕ್ಷರು ವೆಂಕಟೇಶ, ಎಸ್ಸಿ ಮೋರ್ಚಾ ರಾಜ್ಯ ಕಾರ್ಯಕಾರಣಿ ಸದಸ್ಯರು ಶ್ರೀಮತಿ ವಿಜಯಲಕ್ಷ್ಮಿ, ಜಿಲ್ಲಾ ಕಾರ್ಯದರ್ಶಿಗಳು ಶ್ರೀಮತಿ ಅಲವೇಲು,

ಜಿಲ್ಲಾ ಮಹಿಳಾ ಮೂರ್ಚ ಪ್ರಧಾನ ಕಾರ್ಯದರ್ಶಿಗಳು ಶ್ರೀಮತಿ ಪುಷ್ಪಲತಾ, ಜ್ಯೋತಿಪ್ರಕಾಶ್ ಬಿಜೆಪಿ ಮುಖಂಡರು ಶ್ರೀಮತಿ ಹಂಪಿರಮಣ, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ, ನಗರ ಮಹಿಳಾ ಮೋರ್ಚಾ ಅಧ್ಯಕ್ಷರು ಶ್ರೀಮತಿ ನಾಗವೇಣಿ, ನಗರ ಯುವ ಮೋರ್ಚಾ ಅಧ್ಯಕ್ಷರು ಬಾಲಚಂದ್ರ, ಶರಣಗೌಡ, ಓಂ ಪ್ರಕಾಶ್, ಪುಷ್ಪಲತಾ, ರಾಜೇಶ್ವರಿ, ಯುವ ಮೋರ್ಚಾ ಹಾಗೂ ಮಹಿಳಾ ಮೋರ್ಚಾ ಎಲ್ಲಾ ಕಾರ್ಯಕರ್ತರು ಭಾಗವಹಿಸಿದ್ದರು.

# ಮೂಡಲಗಿ:ಸಂಭ್ರಮದಿಂದ ಜರುಗಿದ ಕಳಸಾರೋಹಣ ಕಾರ್ಯಕ್ರಮ



ಮೂಡಲಗಿ: ಪಟ್ಟಣದ ಶ್ರೀ ಶಿವಬೋಧರಂಗ ಮಠದ ರಸ್ತೆಯಲ್ಲಿರುವ ಶ್ರೀ ರೇಣುಕಾ ಯಲ್ಲಮ್ಮಾದೇವಿ ದೇವಸ್ಥಾನದ ಕಳಸಾರೋಹಣ ಹಾಗೂ ಗಣಪತಿ ಮತ್ತು ಶ್ರೀ ನಾಗದೇವರ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮ ಸುಣಧೋಳಿಯ ಶ್ರೀ ಶಿವಾನಂದ ಸ್ವಾಮೀಜಿ ಮತ್ತು ಮುನ್ಯಾಳ–ರಂಗಾಪೂರದ ಡಾ.ಶಿವಲಿಂಗಮುರಘರಾಜೇಂದ್ರ ಶಿವಾಚಾರ್ಯ ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಸೋಮವಾರ ಸಡಗರ ಸಂಭ್ರಮದಿಂದ ಜರುಗಿತು. ಕಳಸಾರೋಹಣ ನಿಮಿತ್ಯ ದೇವಸ್ಥಾನದಲ್ಲಿ ಮುಂಜಾನೆ ಹೋಮ–ಹವನ ಮತ್ತು ಗಣಪತಿ ಮತ್ತು ಶ್ರೀ ನಾಗದೇವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ರೇಣುಕಾ ದೇವಿಗೆ ಮಹಾಭಿಷೇಕ ಜರುಗಿತು.

ಗುರ್ಲಾಪೂರ ರಸ್ತೆಯಲ್ಲಿನ ವೆಂಕಣ್ಣ ಹಳಸಿ ಅವರ ಮನೆಯಿಂದ ಮಹಿಳೆಯರ ಕುಂಭಮೇಳ, ಆರತಿ ಮತ್ತು ವಾದ್ಯಮೇಳ ಹಾಗೂ ಆನೆಯ ಮೇರವಣಿಗೆಯೊಂದಿಗೆ ಕಳಸವನ್ನು ದೇವಸ್ಥಾನಕ್ಕೆ ಬರಮಾಡಿಕೊಂಡು ಶ್ರೀಗಳ ಅಮೃತ ಹಸ್ತದಿಂದ ಕಳಸಾರೋಹಣ ಜರುಗಿತು. ಕಳಸಾರೋಹಣ ಕಾರ್ಯಕ್ರಮದಲ್ಲಿ ದೇವಸ್ಥಾನ ಕಮೀಟಿಯಿಂದ ಸತ್ಕಾರ ಸ್ವೀಕರಿಸಿದ ಮೂಡಲಗಿ–ಗೋಕಾಕ ತಾಲೂಕಾ ಕಾಸಪ ಘಟಕ ಗೌರವಾಧ್ಯಕ್ಷ ಸರ್ವೋತ್ತಮ ಜಾರಕಿಹೊಳಿ ಮಾತನಾಡಿ, ದೇವಿಯ ಆರಾಧನೆಯಿಂದ ದುಷ್ಟಶಕ್ತಿಗಳು ದೂರವಾಗಿ, ಶಾಂತಿ ಸಮೃದ್ಧಿ ನೆಲೆಸಲು ಸಾಧ್ಯ ಮೂಡಲಗಿ ರೇಣುಕಾ ಯಲ್ಲಮ್ಮ ದೇವಸ್ಥಾನದ ಕಮೀಟಿಯವರು ಇಂತಹ ಧಾರ್ಮಿಕ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಯಲ್ಲಮ್ಮಗುಡ್ಡದ ರೇಣುಕಾ ಯಲ್ಲಮ್ಮ ದೇವಸ್ಥಾನದ ಅರ್ಚಕರಾದ ವಿರುಪಾಕ್ಷ ಬೇವಿನಗೀಡದ, ನಿಂಗನಗೌಡ ಸಾವಕ್ಕನವರ, ಮುರಡೇಶ್ವರ ಮ್ಯಾಗೇರಿ, ಕಮೀಟಿ ನಿರ್ದೇಶಕ ಯಲ್ಲಪ್ಪ ಕಾಳಪ್ಪನವರ ಹಾಗೂ ಮೂಡಲಗಿ ದೇವಸ್ಥಾನದ ರವಿ ನೇಸೂರ, ಬಾಳಯ್ಯಾ ಹಿರೇಮಠ, ವೆಂಕಣ್ಣ ಹಳಸಿ, ಸಂತೋಷ ಕಲಾಲ ಯಲ್ಲಪ್ಪ ಪೂಜೇರಿ, ಸುಭಾಸ ಅಮಾತೆ, ಮಲ್ಲಪ್ಪ ಕುಲಗೋಡ, ಕಿರಣ ಕುದರಿ, ಎಸ್.ಎಸ್.ರಾಜನಾಳ, ಗೋಪಾಲ ಪಿರೋಜಿ, ಕಲ್ಲಪ್ಪ ಹಳ್ಳೂರ, ಶಿವಬಸು ಕುದರಿ, ಡಾ.ಪ್ರಕಾಶ ನೇಸೂರ, ಆನಂದ ಕುರಣಗಿ, ಮಲ್ಲಪ್ಪ ಪೂಜೇರಿ, ಮಹಾಂತೇಶ ನೇಸೂರ, ರಮೇಶ ಹಡಪದ, ರಾಮಪ್ಪ ಪುಜೇರಿ ಮತ್ತಿತರರು ಇದ್ದರು.

# ಗಿರಿಸಾಗರ ಶಾಲೆಗೆ ಆಟದ ಮೈದಾನಕ್ಕಾಗಿ ಲೋಕಸಭಾ ಚುನಾವಣೆಯನ್ನು ಬಹಿಷ್ಕರಿಸಿದ ಗ್ರಾಮಸ್ಥರು



ಮೂಡಲಗಿ: ಸರ್ಕಾರಿ ಶಾಲೆಗೆ ಆಟದ ಮೈದಾನದ ನಿರ್ಮಾಣ ಮತ್ತು ಅದಕ್ಕೆ ಜಾಗ ನೀಡದ ಹಿನ್ನಲೆ ಮೇ.7 ರಂದು ಜರುಗುವ ಲೋಕಸಭಾ ಚುನಾವಣೆಯನ್ನು ಬಹಿಷ್ಕರಿಸುವುದಾಗಿ ಮೂಡಲಗಿ ತಾಲೂಕಿನ ಯಾದವಾಡ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಿರಿಸಾಗ ರದಲ್ಲಿ ಗ್ರಾಮಸ್ಥರು ವಿವಿಧ ಸ್ಥಳ ಗಳಲ್ಲಿ ಬ್ಯಾನರ್‌ಗಳನ್ನು ಅಳವಡಿಸಿರುವ ಘಟನೆ ರವಿವಾರದಂದು ಜರುಗಿದೆ. ಈ ವೇಳೆ ಗ್ರಾಪಂ ಉಪ್ಯಾಧ್ಯಕ್ಷ ಕಲ್ಮೇಶ ಗಾಣಿಗೇರ ಮಾತನಾಡಿ, ಮಕ್ಕಳಿಗೆ ಆಟದ ಮೈದಾನದ ಸಲುವಾಗಿ ಸಾಕಷ್ಟು ಬಾರಿ ಮನವಿ ಮಾಡಿದರು ಪ್ರಯೋಜನವಾಗಿಲ, ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪಠ್ಯ ಎಷ್ಟು ಅವಶ್ಯವೋ ಅಷ್ಟೇ ಪಠ್ಯೇತರ ಚುಟುವಟಿಕೆಗಳು ಅವಶ್ಯವಾಗಿದೆ. ಆದರೆ ಆಟದ ಮೈದಾನವೇ ಹೊಂದಿರದ ಕಾರಣ ಕ್ರೀಡಾ ಚುಟುವ ಟಿಕೆಯೇ ಇಲ್ಲದೇ ಹೆಚ್ಚಿನ ಸಾಧನೆ ಮಾಡಲು ವಿದ್ಯಾರ್ಥಿಗಳಿಗೆ ಸಾಧ್ಯವಾಗುತ್ತಿಲ್ಲ ಹಾಗೂ ಸ್ವಲ್ಪ ಜಾಗದಲೇ ಪ್ರಾರ್ಥನೆ, ಶಾಲಾ ವಾರ್ಷಿಕೋತ್ಸವ ಇತರೆ ಚಟುವಟಿಕೆಗಳನ್ನು ಮಾಡುವಂತ ಪರಿಸ್ಥಿತಿ ಇರುವುದರಿಂದ ಮಕ್ಕಳು ಆಟದಿಂದ ವಂಚಿತರಾಗುವಂತಾಗಿದೆ ಎಂದರು.ವಿದ್ಯಾರ್ಥಿಗಳಿಗೆ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪಾಠದ ಜೊತೆಗೆ ಆಟವೂ ಮುಖ್ಯ. ಸರ್ಕಾರವು ಬಿಸಿಯೂಟ, ಸಮವಸ್ತ್ರ, ಶೂ, ಹಾಲು, ಮೊಟ್ಟೆ ನೀಡುತ್ತದೆ. ಆದರೆ ಕ್ರೀಡೆಗೆ ಅಗತ್ಯಕ್ಕೆ ತಕ್ಕಷ್ಟು ಪ್ರೋತ್ಸಾಹ ನೀಡುತ್ತಿಲ್ಲ. ಇದರಿಂದ ಕ್ರೀಡಾಕೂಟದಲ್ಲಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಹೆಚ್ಚಿನ ಸಾಧನ ಮಾಡಲಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷ ಕಲ್ಲಪ್ಪ ಮಾಲಮನ, ಶಂಕರ ತೋಟಗಿ, ಸೈದುಸಾಬ ಚಿಪ್ಪಲಕಟ್ಟಿ, ಶಂಕರ ಭಂಜತ್ರಿ, ಮಂಜು ಸಣ್ಣಕ್ಕಿ, ತುಳಜಪ್ಪ ಜಾಧವ್, ಹಣಮಂತ ತೋಟಗಿ, ಮಹಮ್ಮದಸಾಬ್ ಪಠಾಸ್, ಕರೇಪ್ಪ ಇಟ್ಟನ್ನವರ ಇದ್ದರು.

# ಆರಂಭದ ಮಳೆಗಾಲದಲ್ಲಿ ಗುಡುಗು–ಸಿಡಿಲು ಹಾನಿಯಿಂದ ಸಂರಕ್ಷಣೆಗೆ ಅಗತ್ಯ ಕ್ರಮ ಅನುಸರಿಸಿ: ಡಾ.ವೈ.ರಮೇಷ್ಬಾಬು



ಬಳ್ಳಾರಿ,ಏ–: ಆರಂಭದ ಮಳೆಗಾಲದಲ್ಲಿ ಕಂಡುಬರಬಹುದಾದ ಗುಡುಗು–ಸಿಡಿಲು ಹಾನಯಿಂದ ಸಂರಕ್ಷಣೆಗೆ ಅಗತ್ಯ ಕ್ರಮ ಅನುಸರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ತಿಳಿಸಿದ್ದಾರೆ.ಸಾಮಾನ್ಯವಾಗಿ ಮೇ ತಿಂಗಳಿನಲ್ಲಿ ಕಂಡುಬರುವ ಮಳೆಗಾಲದ ಆರಂಭದ ಹಂತದಲ್ಲಿ ತೀವ್ರತರದ ಗುಡುಗು–ಸಿಡಿಲು ಕಂಡುಬರುವುದು ಸಾಮಾನ್ಯವಾಗಿದ್ದು, ಜೊತೆಗೆ ಬಿರುಸಾಗಿ ಗಾಳಿ ಸಹಿತ ಮಳೆ ಕಂಡುಬರುವುದು ವಾಡಿಕೆಯಾಗಿದೆ. ಈ ಹಿನ್ನಲೆಯಲ್ಲಿ ಬಯಲು ಪ್ರದೇಶಗಳಲ್ಲಿ, ಗಿಡಗಳ ಕೆಳಗಡೆ ಅಥವಾ ಕಬ್ಬಿಣದಿಂದ ಕೂಡಿರುವ ಕಟ್ಟಡ ಅಥವಾ ಶೆ[illegible]ಗಳಲ್ಲಿ ಆಶ್ರಯ ಪಡೆಯದೇ ಸೂಕ್ತ ಸ್ಥಳದಲ್ಲಿ ಇದ್ದು, ಜೀವ ಹಾನಿಯನ್ನು ತಪ್ಪಿಸಲು ಸಾರ್ವಜನಕರಲ್ಲಿ ಅವರು ವಿನಂತಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಕಾಲ ಕಾಲಕ್ಕೆ ನೀಡುವ ಮಾರ್ಗಸೂಚನೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಆರೋಗ್ಯದ ದೃಷ್ಟಿಯಿಂದ ನೀಡುವ ಸಲಹೆಗಳನ್ನು ಅನುಸರಿಸಿ ವಿಪತ್ತಿನಿಂದ ಪಾರಾಗಲು ಕೈಜೋಡಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೈಗೊಳ್ಳಬೇಕಾದ ಕ್ರಮಗಳು:*–ಗುಡುಗು–ಮಿಂಚು ಬರಲಿದೆ ಎಂದು ಗೊತ್ತಾದಾಗ ನೀವು ಬಯಲಿನಲ್ಲಿದ್ದರೆ, ಪಕ್ಕದಲ್ಲಿರುವ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು. ತಗ್ಗು ಪ್ರದೇಶ ಇಲ್ಲದೇ ಬಯಲಿನಲ್ಲಿಯೇ ಇರಬೇಕಾದರೆ ನಮ್ಮ ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಳ್ಳಿ ಇದು ಮಿಂಚಿನಿಂದ ಮೆದುಳಿಗೂ, ಹೃದಯಕ್ಕೂ ಆಗುವ ಹಾನಿಯನ್ನು ತಪ್ಪಿಸುತ್ತದೆ.

ಮರಗಳಿದ್ದ ಪ್ರದೇಶದಲ್ಲಿ ನೀವು ಇದ್ದರೆ ಅಲ್ಲಿಂದ ಬೇಗನೆ ಹೊರಬರುವುದು ಒಳ್ಳೆಯದು. ಏಕೆಂದರೆ ಸಿಡಿಲು ಮೋಡದಿಂದ ಭೂಮಿಗೆ ಹರಿಯಲು ಮರದಂತಹ ಹಸಿ, ಒದ್ದೆ ವಸ್ತುವನ್ನೇ ಆರಿಸಿಕೊಳ್ಳುತ್ತದೆ. ಎತ್ತರದ ಗುಡ್ಡದ ಮೇಲಿದ್ದರೆ ತಗ್ಗಿಗೆ ಇಳಿರಿ, ಕುರಿಮಂದೆ ಅಥವಾ ಜಾನುವಾರುಗಳ ಮಧ್ಯ ನಿಂತಿದ್ದರೆ ಅವುಗಳ ಮಧ್ಯದಲ್ಲಿ ಬಗ್ಗಿ ಕುಳಿತುಕೊಳ್ಳಿ, ಏಕೆಂದರೆ ಮಿಂಚು ಪ್ರಾಣಿಗಳಿಗಿಂತ ಎತ್ತರವಿರುವ ಮನುಷ್ಯನನ್ನೇ ಆರಿಸಿಕೊಳ್ಳುತ್ತದೆ.

ಕೆರೆಯಲ್ಲಿ ಈಜುವುದು, ಸ್ನಾನ ಮಾಡುವುದು ಬೇಡ, ನೀರಿನಲ್ಲಿದ್ದರೆ ತಕ್ಷಣ ಹೊರಬನ್ನಿ. ವಿದ್ಯುತ್ ಕಂಬ, ಎಲೆಕ್ಟ್ರಿಕಲ್ ಟವರ್, ಮೊಬೈಲ್ ಟವರ್ ಟ್ರಾನ್ಸ್‌ಫಾರ್ಮರ್ ಮುಂತಾದವುಗಳ ಹತ್ತಿರವೂ ಇರಬಾರದು. ಮಳೆ ಬರುವ ಸಮಯದಲ್ಲಿ ಮನೆಯ ಟೆರೇಸ್ ಅನ್ನು ಸ್ವಚ್ಛ ಮಾಡುವ ಸಾಹಸಬೇಡ ಎಂದು ಅವರು ತಿಳಿಸಿದ್ದಾರೆ.ಮನೆಯ ಕಿಟಕಿಯ ಬಳಿ ನಿಲ್ಲುವುದಕ್ಕಿಂತಲೂ ಮನೆಯ ಮಧ್ಯದಲ್ಲಿರುವುದು ಸುರಕ್ಷಿತ. ಗುಡುಗು–ಸಿಡಿಲಿನ ಸಂದರ್ಭದಲ್ಲಿ ಫೋನ್‌ನಲ್ಲಿ ಮಾತನಾಡಬಾರದು, ಅದನ್ನು ಚಾರ್ಜ್ ಮಾಡುವ ಸಾಹಸವೂ ಬೇಡ. ಕಾರಿನಲ್ಲಿ ಪ್ರಯಾಣಿಸುತ್ತಿದ್ದರೆ ಗಾಜನ್ನು ಮುಚ್ಚಿಕೊಳ್ಳಿ, ಕಾರಿನ ಬಾಡಿಯನ್ನು ಸಾಧ್ಯವಾದಷ್ಟು ಸ್ಪರ್ಶಿಸದೇ ಮಧ್ಯದಲ್ಲಿ ಕುಳಿತುಕೊಳ್ಳುವುದು ಒಳ್ಳೆಯದು ಮತ್ತು ಕಂಪ್ಯೂಟರ್, ಲ್ಯಾಪ್‌ಟ್ಯಾಪ್‌ಗಳಿಂದ ದೂರವಿರಬೇಕು. ಮನೆಯ ಕಾಂಕ್ರೀಟ್ ಗೋಡೆಗಳನ್ನು ಸ್ಪರ್ಶಿಸದೇ ಕೋಣೆಯ ಮಧ್ಯದಲ್ಲಿದ್ದರೆ ಹೆಚ್ಚು ಸುರಕ್ಷಿತ ಇರುತ್ತದೆ.ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಸಿಡಿಲು ಬಾಧಿತ ವ್ಯಕ್ತಿಗಳು ಆಗಮಿಸಿದಾಗ ತಕ್ಷಣ ಚಿಕಿತ್ಸೆ ಕ್ರಮಗಳನ್ನು ಕೈಗೊಳ್ಳುವ ಕುರಿತು ವೈದ್ಯಾಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು ಅಗತ್ಯ ಔಷಧಿಗಳನ್ನು ದಾಸ್ತಾನು ಇಟ್ಟಿಕೊಳ್ಳಲಾಗಿದೆ ಎಂದು ಡಿಹೆ[illegible]ಓ ಡಾವೈ.ರಮೇಶ್ ಬಾಬು ಅವರು ತಿಳಿಸಿದ್ದಾರೆ.

# ರಾಣಿತೋಟದಲ್ಲಿ ಸೋಮಶೇಖರರೆಡ್ಡಿಯವರಿಂದ ಅಬ್ಬರದ ಪ್ರಚಾರ



ಬಳ್ಳಾರಿ ಏ –: ಬಳ್ಳಾರಿ ನಗರದ ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ ಅವರು ನಗರದ 10ನೇ ವಾರ್ಡಿನ ಮರಿಸ್ವಾಮಿಮಠ. ರಾಣಿತೋಟದಲ್ಲಿ. ಮನೆ ಮನೆಗೆ ತೆರಳಿ. ಲೋಕಸಭಾ ಚುನಾವಣೆಯ ಬಿಜೆಪಿ ಅಭ್ಯರ್ಥಿ ಬಿ. ಶ್ರೀರಾಮುಲು ಅವರ ಪರವಾಗಿ ಇಂದು ಪ್ರಚಾರ ಮಾಡಿದರು.ಗ್ಯಾರೆಂಟಿಗಳನ್ನು ನಂಬಿ ಕಾಂಗ್ರೆಸ್ ಗೆ ಮತ ನೀಡಿ ಮೋಸ ಹೋಗಬೇಡಿ, ಈ ಗ್ಯಾರೆಂಟಿಗಳು ಈ ಚುನಾವಣೆ ನಂತರ ನಿಲ್ಲುವುದು ಗ್ಯಾರೆಂಟಿ,ಪ್ರೀ ಕರೆಂಟ್ ಬಸ್ ಸೌಲಭ್ಯ ನೀಡಲು ಸರ್ಕಾರದ ಬಳಿ ಹಣ ಇಲ್ಲ. ಲೋಕಸಭಾ ಚುನಸವಣೆ ಅಂತ ಸಾಲ ಮಾಡಿ ನೀಡಿದೆ. ಚುನಾವಣೆ ನಂತರನಿಲ್ಲೋದು ಗ್ಯಾರೆಂಟಿ. ಅದಕ್ಕಾಗಿ ದೇಶದ ಭದ್ರತೆ, ಆರ್ಥಿಕ ಅಭಿವೃದ್ಧಿ, ಉತ್ತಮ ರೈಲ್ವೇ ಸೌಲಭ್ಯಕ್ಕಾಗಿ ಬಿಜೆಪಿಗೆ ಮತ ನೀಡಿ, ಶ್ರೀರಾಮುಲು ಗೆದ್ದರೆ ಕೇಂದ್ರದಲ್ಲಿ ಮಂತ್ರಿ ಆಗ್ತಾರೆ ಬಳ್ಳಾರಿ ನಗರ ಮತ್ತಷ್ಟು ಅಭಿವೃದ್ಧಿ ಆಗಲಿದೆಂದು ಬಿಜೆಪಿಗೆ ಮತ ನೀಡಲು ಮನವಿ ಮಾಡಿದರು.

ಪಾಲಿಕೆ ಮಾಜಿ ಸದಸ್ಯ ವಿ. ಎಸ್. ಮರೀದೇವಯ್ಯ. ಶ್ರೀನಿವಾಸ್. ಮಹಾನಗರ ಪಾಲಿಕೆಯ ಸದಸ್ಯರಾದ. ಶ್ರೀನಿವಾಸ್ ಮೋತ್ಕಕರ್. ಉಮೇಶ್.ನಾಗೇಶ್. ಮುಂತಾದ ಭಾಗವಹಿಸಿದ್ದರು.

# ಲವ್ ಜೀಹಾದ್ ಪ್ರಕರಣದಲ್ಲಿ ನೊಂದ ಎಸ್ಸಿ ಮಹಿಳೆಯ ಮನೆಗೆ ಬಿಜೆಪಿ ನಾಯಕರು ಭೇಟಿ



ಯರಗಟ್ಟಿ : ಸಮೀಪದ ಮುನವಳ್ಳಿ ಪಟ್ಟಣದಲ್ಲಿ ನಡೆದ ಲವ್ ಜೀಹಾದ್ ಪ್ರಕರಣದಲ್ಲಿ ನೊಂದ ಎಸ್ಸಿ ಮಹಿಳೆಯ ಮನೆಗೆ ಬಿಜೆಪಿ ನಾಯಕರು ಭೇಟಿ ನೀಡಿ ಸಾಂತ್ವನ ಹೇಳಿದರು.

ಈ ಸಂದರ್ಭದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಬಿಜೆಪಿ ಜಿಲ್ಲಾ ಅಧ್ಯಕ್ಷ ಸುಭಾಷ್ ಪಾಟೀಲ, ಮಹಿಳೆಯರ ಮೇಲಾಗುತ್ತಿರುವ ಎಲ್ಲ ರೀತಿಯ ದೌರ್ಜನ್ಯಗಳನ್ನು ನಿಯಂತ್ರಿಸಲು ರಾಜ್ಯ ಸರ್ಕಾರ ವಿಫಲವಾಗಿದ್ದೆ.

'ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರ ತವರು ಜಿಲ್ಲೆಯಲ್ಲಿ ಹಿಂದೂ ಮಹಿಳೆಯ ಮೇಲೆ ಲವ್ ಜೀಹಾದ್ ನಡೆದಿದ್ದು ಜಾತಿ ದೌರ್ಜನ್ಯ ಹಾಗೂ ಮತಾಂದತೆಯರು ಮತಾಂತರ ನಡೆದರು ಇನ್ನೂ ಸರಿಯಾದ ರೀತಿಯಲ್ಲಿ ಪೊಲಿಸ್ ಕ್ರಮ ಆಗದಿರುವದು ಪೊಲಿಸ್ ವಿಫಲತೆ ಹಾಗೂ ಸರಕಾರದ ಕಾನೂನು ಸುವ್ಯವಸ್ಥೆ ಹಾಳಾಗಿದೆ. ಇಂತಹ ಕೃತ್ಯಗಳು ದಿನದಿನಕ್ಕೆ ಹೆಚ್ಚಾಗುತಿದ್ದು ಇದಕ್ಕೆಲ್ಲ ಕಾಂಗ್ರೆಸ್ ಸರ್ಕಾರ ಪ್ರೋತ್ಸಾಹಿಸುವಂತಾಗಿದೆ ಎಂದು ಅಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ನಿಕಟ ಪೂರ್ವ ಅಧ್ಯಕ್ಷ ಸಂಜಯ ಪಾಟೀಲ, ವಿಧಾನ ಪರಿಷತ್ ಸದಸ್ಯ ಸಾಬಣ್ಣ ತಳವಾರ, ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್. ಎಸ್. ಸಿದ್ದನಗೌಡರ ಬಿಜೆಪಿ ನಾಯಕರಾದ ವಿರೂಪಾಕ್ಷ ಮಾಮನಿ, ಜೆಡಿಎಸ್ ನಾಯಕ ಪಂಚನಗೌಡ ದ್ಯಾಮನಗೌಡರ, ಮಲ್ಲೇಶ ಸುಳೆಭಾವಿ, ಸುಭಾಷ್ ಗೀದಿಗೌಡ್ರ, ಶೇಖರ ಗೊಕಾವಿ, ಜಿಲ್ಲಾ ಎಸ್ಸಿ ಮೊರ್ಚಾ ಅಧ್ಯಕ್ಷ ಯಲ್ಲೇಶ ಕೊಲಕಾರ, ಜಿಲ್ಲಾ ಮಹಿಳಾ ಮೊರ್ಚಾ ಅಧ್ಯಕ್ಷೆ ಡಾ.ನಯನ ಬಸ್ಮೆ, ಅಲ್ಪಸಂಖ್ಯಾತ ಮೊರ್ಚಾ ಜಿಲ್ಲಾಧ್ಯಕ್ಷ ದಾವಲಸಾಬ ಚಿಪ್ಪಿ, ಮಂಜು ಪಮ್ಮಾರ, ಶ್ರೀಕಾಂತ ಮಲಗೌಡ್ರ , ಅಶೋಕ ಗೋಮಾಡಿ, ಬಾಬು ಭಜಂತ್ರಿ, ಗುರು ಮೆಳವೆಂಕಿ, ಉವಪ್ಪ ಭಜಂತ್ರಿ, ಯಲ್ಲಪ್ಪ ಕಾಳಪ್ಪನವರ, ನೂರಾರು ಮುಖಂಡರು ಉಪಸ್ಥಿತರಿದ್ದರು.

# ನೇಹ ಹತ್ಯೆಯ ಆರೋಪಿಗೆ ಕಠಿಣ ಶಿಕ್ಷೆಯಾಗಲಿ ವೀರಶೈವ ಮಹಾಸಭಾ ಆಗ್ರಹ–ಚಾನಾಳ್ ಶೇಖರ್



ಬಳ್ಳಾರಿ ಏ–: ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನ ನೇಹಾ ಹಿರೇಮಠ ಅವರ ಹತ್ಯೆಗೈದ ವ್ಯಕ್ತಿಗೆ ಕಠಿಣ ಶಿಕ್ಷೆಯಾಗಬೇಕೆಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಒತ್ತಾಯಿಸಿದೆ. ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಚಾನಾಳ್ ಶೇಖರ್ ಪತ್ರಿಕಾ ಪ್ರಕಟಣೆ ನೀಡುತ್ತಾ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸದಸ್ಯ ನಿರಂಜನಯ್ಯ ಹಿರೇಮಠ ಅವರ ಪುತ್ರಿ ನೇಹಾ ಹಿರೇಮಠರವರ ಹತ್ಯೆ ಪ್ರಕರಣವನ್ನು ಮಹಾಸಭಾದ ಬಳ್ಳಾರಿ ಜಿಲ್ಲಾ ಘಟಕ ಉಗ್ರವಾಗಿ ಖಂಡಿಸುತ್ತದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುವ ಮಹಾಸಭೆಯು ಮುಖ್ಯಮಂತ್ರಿ ಮತ್ತು ಗೃಹ ಸಚಿವರನ್ನು ಮುಂದಿನ ದಿನಗಳಲ್ಲಿ ಈ ರೀತಿಯ ಕೃತ್ಯಗಳು ನಡೆಯದಂತೆ ಅಗತ್ಯ ಕ್ರಮಕೈಗೊಳ್ಳಲು ಹಾಗೂ ವಿದ್ಯಾರ್ಥಿನಿಯ ಬರ್ಬರ ಹತ್ಯೆಗೆದಿರುವ ವ್ಯಕ್ತಿಗೆ ಮತ್ತು ಅವನಿಗೆ ಸಹಕಾರ ನೀಡಿರುವ ಎಲ್ಲಾ ವ್ಯಕ್ತಿಗಳಿಗೂ ಕಠಿಣ ಶಿಕ್ಷೆಯನ್ನು ವಿಧಿಸುವಂತೆ ಒತ್ತಾಯಿಸಿದ್ದಾರೆ.

# ಬಳ್ಳಾರಿ: ಮಹಾನಗರ ಪಾಲಿಕೆಯಲ್ಲಿ ಕಂಟ್ರೋಲ್ ರೂಂ ಆರಂಭ–ಆಯುಕ್ತ ಖಲೀಲ್‌ಸಾಬ್



ಬಳ್ಳಾರಿ,ಏ–: 09–ಬಳ್ಳಾರಿ (ಪ.ಪಂ) ಲೋಕಸಭಾ ಕ್ಷೇತ್ರದ 94–ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯಸಮ್ಮತವಾಗಿ ನಡೆಸುವ ಸಂಬಂಧ ಸಾರ್ವಜನಿಕರ ಅನುಕೂಲಕ್ಕಾಗಿ ಬಳ್ಳಾರಿ ಮಹಾನಗರ ಪಾಲಿಕೆಯ ಕಚೇರಿಯಲ್ಲಿ ಕಂಟ್ರೋಲ್ ರೂಂ ಆರಂಭಿಸಲಾಗಿದೆ ಎಂದು 94–ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್‌ಅವರು ತಿಳಿಸಿದ್ದಾರೆ.

ಚುನಾವಣೆಗೆ ಸಂಬಂಧಿಸಿದ ಯಾವುದೇ ದೂರುಗಳು, ಮಾಹಿತಿ ಹಾಗೂ ಇತರೆ ಸಾರ್ವಜನಕ ಕುಂದುಕೊರತೆಗಳು ಇದ್ದಲ್ಲಿ ದೂರವಾಣಿ ಸಂಪರ್ಕ ಸಂಖ್ಯೆ 08932–272356, ಮತದಾರರ ಸಹಾಯವಾಣಿ–1950, ಸಿ–ವಿಜಿಲ್ ಹಾಗೂ ಎನ್.ಜಿ.ಎಸ್.ಪಿ ಪೋರ್ಟಲ್ ಮೂಲಕ ದೂರು ಸಲ್ಲಿಸಬಹುದು. ಸಾರ್ವಜನಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.